RNU AIR DHARWAD

**SEPTEMBER 16, 2025**

**AKASHAVANI - DHARWAD**

**PRADESH SAAMACHARA (KANNADA) 12 PM**

**<><><>**

**ರಾಮನಗರದಲ್ಲಿ ಆರಂಭಗೊಂಡ** ನಗರ ಬಸ್ ಸಂಚಾರವನ್ನು ಸದುಪಯೋಗ ಪಡಿಸಿಕೊಳ್ಳಬೇಕು ಎಂದು ಸಾರಿಗೆ ಖಾತೆ ಸಚಿವ ರಾಮಲಿಂಗಾರೆಡ್ಡಿ ಹೇಳಿದ್ದಾರೆ. ರಾಮನಗರದ ಕೆ.ಎಸ್.ಆರ್.ಟಿ.ಸಿ ಬಸ್ ನಿಲ್ದಾಣದಲ್ಲಿ ಆಯೋಜಿಸಲಾಗಿದ್ದ ರಾಮನಗರ ನಗರ ಬಸ್ ಸಂಚಾರ ಪ್ರಾರಂಭೋತ್ಸವಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ರಾಮನಗರ ಬಸ್ ನಿಲ್ದಾಣಕ್ಕೆ ಅಗತ್ಯ ಜಮೀನು ಒದಗಿಸಿದ್ದಲ್ಲಿ ಹೊಸ ಬಸ್ ನಿಲ್ದಾಣವನ್ನು ನಿರ್ಮಿಸಲಾಗುವುದು. ಈಗಿರುವ ಬಸ್ ನಿಲ್ದಾಣವನ್ನು ಶೀಘ್ರದಲ್ಲಿಯೇ ನವೀಕರಿಸಲಾಗುವುದು. ಬೆಂಗಳೂರಿನ ಸುತ್ತಮುತ್ತಲಿರುವ ಜಿಲ್ಲೆಗಳಿಗೆ ಬೆಂಗಳೂರು ನಗರ ಸಾರಿಗೆ ಬಸ್‌ಗಳು ಸಂಚರಿಸಲು ಕ್ರಮವಹಿಸಲಾಗಿದೆ. ಸುಗ್ಗನ ಹಳ್ಳಿಯವರೆಗೆ ಸಂಚರಿಸುತ್ತಿರುವ ಬೆಂಗಳೂರು ನಗರ ಬಸ್ ಸಾರಿಗೆಯನ್ನು ರಾಮನಗರದವರೆಗೆ ವಿಸ್ತರಿಸಲಾಗುವುದು ಎಂದರು. ಸಾರಿಗೆ ಸಂಸ್ಥೆಗೆ ಹೊಸದಾಗಿ 5 ಸಾವಿರದ 800 ಬಸ್‌ಗಳನ್ನು ಖರೀದಿಸಲಾಗಿದೆ. ಚಾಲಕರು, ನಿರ್ವಾಹಕರು, ಮೆಕಾನಿಕ್‌ಗಳು ಸೇರಿದಂತೆ 10 ಸಾವಿರ ಉದ್ಯೋಗಿಗಳನ್ನು ನೇಮಕ ಮಾಡಿಕೊಳ್ಳಲು ಕ್ರಮ ಕೈಗೊಳ್ಳಲಾಗಿದೆ ಎಂದು ಹೇಳಿದರು.

**<><><>**

**ಕೇಂದ್ರ ಸರ್ಕಾರದ ಮಹಿಳಾ ಮತ್ತು ಮಕ್ಕಳ** ಕಲ್ಯಾಣ ಇಲಾಖೆ ವತಿಯಿಂದ, ರಾಜ್ಯಾದ್ಯಂತ ಇದೇ ತಿಂಗಳ 12 ರಿಂದ ಆರಂಭಗೊಂಡ ಪೋ 'ಣ್ ಮಾಸಾಚರಣೆ ಅಕ್ಟೋಬರ್ 11 ರವರೆಗೆ ನಡೆಯಲಿದೆ. ವಿಜಯನಗರ ಜಿಲ್ಲೆಯಲ್ಲಿ, ತಾಲೂಕು ಮಟ್ಟದ ಪೋಷಣ ಮಾಸಾಚರಣೆಗೆ, 'ಏಕ್ ಪೇಡ್ ಮಾ ಕೆ ನಾಮ್', ತಾಯಿಯ ಹೆಸರಿನಲ್ಲಿ ಒಂದು ಗಿಡ ನೆಡುವ ಮೂಲಕ ಚಾಲನೆ ನೀಡಲಾಯಿತು. ಅಂಗನವಾಡಿಗಳನ್ನು ಕೇಂದ್ರೀಕರಿಸಿ, ಗ್ರಾಮ ಪಂಚಾಯಿತಿ ಮಟ್ಟಗಳಲ್ಲಿ ಆಯೋಜಿತ ಪೋಷಣ್ ಮಾಸಾಚರಣೆ ಕುರಿತು ಪ್ರದೇಶ ಸಮಾಚಾರಕ್ಕಾಗಿ ಮಾಹಿತಿ ನೀಡಿದ್ದಾರೆ, ಜಿಲ್ಲಾ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಉಪ ನಿರ್ದೇಶಕರಾದ ಶ್ವೇತಾ. ಎಸ್.

**<><><>**

**'ಸಂಸದರ ಕ್ರೀಡಾ ಮಹೋತ್ಸವ 2025' ರ ಅಡಿ,** 'ಧಾರವಾಡ ಕ್ರೀಡಾ ಮಹೋತ್ಸವ', 3 ಹಂತಗಳಲ್ಲಿ, ನಡೆಯಲಿದೆ. ಈ ತಿಂಗಳ 21 ರಿಂದ ಆರಂಭಗೊಂಡು, ಡಿಸೆಂಬರ್ 25 ರ ವರೆಗೆ, ಕಬಡ್ಡಿ, ಖೋಖೋ, ವಾಲಿಬಾಲ್, ಕುಸ್ತಿ, ಅಥ್ಲೆಟಿಕ್ಸ್, ಲಗೋರಿ, ಹಗ್ಗ–ಜಗ್ಗಾಟ, ಚಿನ್ನಿದಾಂಡು, ಗೋಲಿ, ಯೋಗ, ಮಲ್ಲಕಂಬ ಸೇರಿದಂತೆ, ದೇಶಿ ಮತ್ತು ಗ್ರಾಮೀಣ ಕ್ರೀಡೆಗಳನ್ನು ಆಯೋಜಿಸಲಾಗುತ್ತಿದೆ. ಜನವರಿ ತಿಂಗಳಲ್ಲಿ, ಅಂತಾರಾಷ್ಟ್ರೀಯ ಗಾಳಿಪಟ ಉತ್ಸವ ಸಹ ನಡೆಯಲಿದೆ. Sansad khel mahotsav.in ಮೂಲಕ, ಈ ತಿಂಗಳ 20 ರೊಳಗೆ, ಹೆಸರು ನೋಂದಾಯಿಸುವಂತೆ, ಕೇಂದ್ರ ನವ ಹಾಗೂ ನವೀಕರಿಸಬಹುದಾದ ಇಂಧನಗಳ ಖಾತೆ ಸಚಿವ ಪ್ರಲ್ಹಾದ ಜೋಶಿ, ಕೋರಿದ್ದಾರೆ.

**<><><>**

**ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ** ದಿನಾಚರಣೆ ಅಂಗವಾಗಿ ನಾಡಿನಾದ್ಯಂತ, ಮತದಾನ ಜಾಗೃತಿ ಅಭಿಯಾನ ಜರುಗಿದವು. **ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಟೀಕೆಗಳು** ಅಭಿವೃದ್ಧಿಗೆ ಪೂರಕವಾಗಿರಬೇಕು ಎಂದು ಕೊಪ್ಪಳ ಜಿಲ್ಲಾ ಉಸ್ತುವಾರಿ ಸಚಿವ ಶಿವರಾಜ ತಂಗಡಗಿ ಹೇಳಿದ್ದಾರೆ. ಕೊಪ್ಪಳ ಜಿಲ್ಲಾಧಿಕಾರಿ ಕಚೇರಿಯಲ್ಲಿ ನಡೆದ ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. **ಬಾಗಲಕೋಟೆ ಜಿಲ್ಲಾಡಳಿತ ಭವನದಲ್ಲಿ** ಆಯೋಜಿತ ಪ್ರಜಾಪ್ರಭುತ್ವ ದಿನಾಚರಣೆ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಸಂಸದ ಪಿ.ಸಿ ಗದ್ದಿಗೌಡರ – ಪ್ರಜಾಪ್ರಭುತ್ವದ ಮೌಲ್ಯಗಳು ಹಾಗೂ ವಿಚಾರಗಳನ್ನು ಮುಂದಿನ ಪೀಳಿಗೆಗೆ ತಿಳಿಸಿ, ಸುದೃಢಗೊಳಿಸುವ ಕಾರ್ಯವಾಗಬೇಕಿದೆ ಎಂದರು. **ದಕ್ಷಿಣ ಕನ್ನಡ ಜಿಲ್ಲೆ,** ಮಂಗಳೂರಿನಲ್ಲಿ ಆಯೋಜಿತ ಪ್ರಜಾಪ್ರಭುತ್ವ ದಿನಾಚರಣೆ ಕಾರ್ಯಕ್ರಮವನ್ನು ವಿಧಾನ ಪರಿಷತ್ ಸದಸ್ಯ ಐವನ್ ಡಿಸೋಜಾ ಉದ್ಘಾಟಿಸಿದರು. **ರಾಯಚೂರಿನಲ್ಲಿ ಏರ್ಪಡಿಸಿದ್ದ ಕಾರ್ಯಕ್ರಮದಲ್ಲಿ** ಪಾಲ್ಗೊಂಡು ಮಾತನಾಡಿದ, ಶಾಸಕ ಬಸನಗೌಡ ದದ್ದಲ್ –ಸಂವಿಧಾನಶಿಲ್ಪಿ ಡಾಕ್ಟರ ಬಿ.ಆರ್ ಅಂಬೇಡ್ಕರ್ ಅವರು ರಚಿಸಿದ ಸಂವಿಧಾನದ ಆಶಯದಂತೆ ಎಲ್ಲರೂ ಒಗ್ಗೂಡಿ, ಸಹಬಾಳ್ವೆಯಿಂದ ಜೀವನ ನಡೆಸಿದಾಗ ಪ್ರಜಾಪ್ರಭುತ್ವಕ್ಕೆ ಅರ್ಥ ಬರುತ್ತದೆ ಎಂದರು.

**<><><>**

**ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ,** 75ನೇ ಜನ್ಮ ದಿನಾಚರಣೆ ಹಿನ್ನೆಲೆ, ನಾಳೆಯಿಂದ, ಅಕ್ಟೋಬರ್ 2 ಗಾಂಧಿ ಜಯಂತಿಯವರೆಗೆ, ಸೇವಾ ಪಾಕ್ಷಿಕ ಆಯೋಜಿತವಾಗಿದೆ.

**<><><>**

**ಪ್ರಧಾನಮಂತ್ರಿ ನರೇಂದ್ರ** ಮೋದಿ ಅವರ 75 ನೇ ಹುಟ್ಟುಹಬ್ಬದ ಅಂಗವಾಗಿ ನಾಳೆ ಬೆಳಗ್ಗೆ 7 ಗಂಟೆಗೆ ಚಿಕ್ಕಬಳ್ಳಾಪುರ ನಗರದ ಜೈ ಭೀಮ್ ವಸತಿ ನಿಲಯದಿಂದ ಒಕ್ಕಲಿಗ ಕಲ್ಯಾಣ ಮಂಟಪದವರೆಗೆ ಸೇವಾ ಪಾಕ್ಷಿಕ ಅಭಿಯಾನ – 2025 ನಮೋ ಯುವ ರನ್ ವಾಕಥಾನ್ ಆಯೋಜಿಸಲಾಗಿದೆ ಎಂದು ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರದ ಸಂಸದರ ಕಚೇರಿಯ ಪ್ರಕಟಣೆ ತಿಳಿಸಿದೆ.

**<><><>**

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.**

**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ 1 ಗಂಟೆ 10 ನಿಮಿಷಕ್ಕೆ.**

**<><><>**